J-72 (48)

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಅರುಣ ಶಹಾಪುರ ಇವರು ನಿಯಮ 72 ರಡಿಯಲ್ಲಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನೆ.**

**ವಿಷಯ**

ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ಸೇವೆಯಲ್ಲಿರುವಾಗಲೇ ಮರಣ ಹೊಂದಿದ ಬೋಧಕರ ಹಾಗೂ ಬೋಧಕೇತರ ಕುಟುಂಬದವರಿಗೆ ಅನುಕಂಪ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳುವ / ನೀಡುವ ಕುರಿತು.

**ಸರ್ಕಾರದ ಹೇಳಿಕೆ**

ಕರ್ನಾಟಕ ಶಿಕ್ಷಣ ಸಂಸ್ಥೆಗಳು (ಕಾಲೇಜು ಶಿಕ್ಷಣ) ನಿಯಮಗಳು -2003 ರ ನಿಯಮ 8(2)ರಲ್ಲಿ " Vacant and unapproved Post of Non-teaching Staff as on 01.03.2001 shall be permanently unaided. Any vacancies in the Non-teaching Post Whichever as arisen after 01.03.2001 on account of retirement, resignation, removal, dismissal and death etc., are to remain permanently unaided. Such Vacancies which are unaided shall be filled by the management and salary and other allowances shall be paid from its own resources" ಎಂದು ತಿಳಿಸಲಾಗಿರುತ್ತದೆ. ಆದ್ದರಿಂದ, "ಕರ್ನಾಟಕ ಶೈಕ್ಷಣಿಕ ಸಂಸ್ಥೆಗಳ (ಕಾಲೇಜು ಶಿಕ್ಷಣ) ನಿಯಮಗಳು, 2003ರ ನಿಯಮ 8(2)ರಲ್ಲಿ ತಿಳಿಸಿರುವಂತೆ ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿ ದಿ:01.03.2001ರ ನಂತರ ತೆರವಾಗುವ ಬೋಧಕೇತರರ ಹುದ್ದೆಗಳು ಶಾಶ್ವತವಾಗಿ ಅನುದಾನರಹಿತವೆಂದು ಪರಿಗಣಿಸಲ್ಪಡುವುದರಿಂದ ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುಕಂಪದ ಆಧಾರದ ಮೇಲೆ ಬೋಧಕೇತರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ.

ಮುಂದುವರೆದು, ಖಾಸಗಿ ಅನುದಾನಿತ ಪದವಿ ಕಾಲೇಜುಗಳಲ್ಲಿನ ಬೋಧಕ ಹುದ್ದೆಯು ಗ್ರೂಪ್-ಎ ಹುದ್ದೆಯಾಗಿದ್ದು, ಅನುಕಂಪದ ಆಧಾರದ ನೇಮಕಾತಿ ವ್ಯಾಪ್ತಿಗೆ ಒಳಪಡುವುದಿಲ್ಲ.

ಇಡಿ 165 ಯುಪಿಸಿ 2020

**(ಡಾ: ಅಶ್ವತ್ಥ ನಾರಾಯಣ ಸಿ.ಎನ್.)**
ಉಪ ಮುಖ್ಯಮಂತ್ರಿಗಳು (ಉನ್ನತ ಶಿಕ್ಷಣ)